ನವೆಂಬರ್ 2022

ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ – ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ

ಸ್ವಚ್ಛ ಸಂಕೀರ್ಣ ಜಲೋತ್ಸವ Har Ghar Jal Jal Jeevan Mission

# ಸ್ವಚ್ಛತಾವಾಣಿ
## ವಾರ್ತಾಪತ್ರ

## ಅಪರ ಮುಖ್ಯಕಾರ್ಯದರ್ಶಿಯವರ ಅಧ್ಯಕ್ಷತೆಯಲ್ಲಿ ಕಲ್ಯಾಣ ಕರ್ನಾಟಕದ ವಿಭಾಗವಾರು ಪ್ರಗತಿ ಪರಿಶೀಲನಾ ಸಭೆ

**ಶ್ರೀ ಎಲ್. ಕೆ ಅತೀಕ್, ಅಪರ ಮುಖ್ಯಕಾರ್ಯದರ್ಶಿಗಳು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ** ಅವರ ಅಧ್ಯಕ್ಷತೆಯಲ್ಲಿ ಕಲಬುರಗಿಯಲ್ಲಿ **ಸ್ವಚ್ಛ ಭಾರತ ಮಿಷನ್ ಯೋಜನೆಯ** ಕುರಿತಂತೆ ಕಲ್ಯಾಣ ಕರ್ನಾಟಕದ ವಿಭಾಗವಾರು ಪ್ರಗತಿ ಪರಿಶೀಲನಾ ಸಭೆ ನಡೆಯಿತು. ಈ ವೇಳೆ ಪಂಚಾಯತ್ ರಾಜ್ ಆಯುಕ್ತಾಲಯದ ಆಯುಕ್ತರಾದ **ಶ್ರೀಮತಿ ಪ್ರಿಯಾಂಕ ಮೇರಿ ಫ್ರಾನ್ಸಿಸ್, RDWSD ನಿರ್ದೇಶಕರಾದ ಶ್ರೀ ಗಂಗಾಧರ ಸ್ವಾಮಿ, ಕಲ್ಯಾಣ ಕರ್ನಾಟಕ ವಿಭಾಗದ ಸಿ. ಇ. ಓಗಳು, ಅಭಿವೃದ್ಧಿ ಉಪಕಾರ್ಯದರ್ಶಿ ಶ್ರೀ ಮಹೇಶ್ ಎಸ್. ಸಿ, ISA ನಿರ್ದೇಶಕರಾದ ಶ್ರೀಮತಿ ಶೀತಲ್ ಸಿಂಗ್** ಸೇರಿದಂತೆ ಇಲಾಖೆಯ ಹಿರಿಯ ಅಧಿಕಾರಿಗಳು ಭಾಗಿಯಾದರು.







## ಜಲ ಜೀವನ್ ಮಿಷನ್ ಯೋಜನೆಯ ಕಾಮಗಾರಿಗಳನ್ನು ವೀಕ್ಷಿಸಿದ ಅಪರ ಮುಖ್ಯಕಾರ್ಯದರ್ಶಿ

**ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ, ಅಪರ ಮುಖ್ಯಕಾರ್ಯದರ್ಶಿಗಳಾದ ಶ್ರೀ ಎಲ್. ಕೆ ಅತೀಕ್‌ರವರು** ಯಾದಗಿರಿ ಜಿಲ್ಲೆಯ ಮುಂಡರಗಿ ಗ್ರಾಮ ಪಂಚಾಯಿತಿಗೆ ಭೇಟಿ ನೀಡಿ **ಜಲ ಜೀವನ್ ಮಿಷನ್ ಯೋಜನೆಯ** ಕಾಮಗಾರಿಗಳನ್ನು ವೀಕ್ಷಣೆ ಮಾಡಿದರು. ಈ ವೇಳೆ ಯಾದಗಿರಿ ಜಿಲ್ಲಾ ಪಂಚಾಯಿತಿ ಸಿ.ಇ.ಓ, ಯೋಜನಾ ನಿರ್ದೇಶಕರು ಸೇರಿದಂತೆ ಹಿರಿಯ ಅಧಿಕಾರಿಗಳು ಹಾಜರಿದ್ದರು.





## ಜಲ ಜೀವನ್ ಮಿಷನ್ ಯೋಜನೆಯ ಕಾಮಗಾರಿಗಳನ್ನು ಪರಿಶೀಲಿಸಿದ RDWSD ನಿರ್ದೇಶಕರು

**ಶ್ರೀ ಗಂಗಾಧರ ಸ್ವಾಮಿ, ನಿರ್ದೇಶಕರು, RDWSD** ರವರು ವಿಜಯಪುರ ಜಿಲ್ಲೆಯ ವಿವಿಧ ಗ್ರಾಮ ಪಂಚಾಯಿತಿಗಳಿಗೆ ಭೇಟಿ ನೀಡಿ **ಜಲ ಜೀವನ್ ಮಿಷನ್ ಯೋಜನೆಯ** ಕಾಮಗಾರಿಗಳನ್ನು ಪರಿಶೀಲಿಸಿದರು. ಈ ವೇಳೆ ಜಿಲ್ಲಾ ಪಂಚಾಯಿತಿ ಸಿ.ಇ.ಓ, ತಾ.ಪಂ. ಕಾರ್ಯನಿರ್ವಾಹಕ ಅಧಿಕಾರಿಗಳು, ತಹಶೀಲ್ದಾರರುಗಳು ಸೇರಿದಂತೆ ಇಲಾಖೆಯ ಹಿರಿಯ ಅಧಿಕಾರಿಗಳು ಉಪಸ್ಥಿತರಿದ್ದರು.







## ISA ನಿರ್ದೇಶಕರಿಂದ ಪ್ರಗತಿ ಪರಿಶೀಲನಾ ಸಭೆ

**ಶ್ರೀಮತಿ ಶೀತಲ್ ಸಿಂಗ್, ISA** ನಿರ್ದೇಶಕರು, **RDWSD** ರವರು ಕಲಬುರಗಿ ಜಿಲ್ಲೆಯ ಭೇಟಿ ವೇಳೆ **ISA** ಮತ್ತು **SBMG** ಸಮಾಲೋಚಕರೊಂದಿಗೆ **SBMG** ಹಾಗೂ **JJM** ಯೋಜನೆಗಳ ಪ್ರಗತಿ ಪರಿಶೀಲನಾ ಸಭೆ ನಡೆಸಿದರು. ಈ ವೇಳೆ **DPM, MIS** ಹಾಗೂ **EE** ಉಪಸ್ಥಿತರಿದ್ದರು.









## ವಿಶ್ವಬ್ಯಾಂಕ್ ಸಹಯೋಗದೊಂದಿಗೆ ತರಬೇತಿ ಕಾರ್ಯಾಗಾರಕ್ಕೆ ನಿರ್ದೇಶಕರಿಂದ ಚಾಲನೆ




**ಜಲಜೀವನ್ ಮಿಷನ್ ಅನುಷ್ಠಾನದ** ಕುರಿತು **ವಿಶ್ವಬ್ಯಾಂಕ್ ಸಹಯೋಗದೊಂದಿಗೆ ಹಾವೇರಿ ಜಿಲ್ಲಾ ಪಂಚಾಯತ್** ಸಭಾಂಗಣದಲ್ಲಿ ನಡೆದ ತರಬೇತಿ ಕಾರ್ಯಾಗಾರಕ್ಕೆ **ಶ್ರೀ ಗಂಗಾಧರ ಸ್ವಾಮಿ, ನಿರ್ದೇಶಕರು ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ,** ಚಾಲನೆ ನೀಡಿದರು.

ಈ ವೇಳೆ **ಶ್ರೀಮತಿ ಶೀತಲ್. ಎನ್. ಸಿಂಗ್, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆಯ ಐ.ಎಸ್.ಎ ನಿರ್ದೇಶಕರು,** ಹಾವೇರಿ ಜಿಲ್ಲಾ ಪಂಚಾಯಿತಿ ಸಿ.ಇ.ಒ, ತಾ.ಪಂಇ.ಓ ಗಳು ಸೇರಿದಂತೆ ಇಲಾಖೆಯ ಹಿರಿಯ ಅಧಿಕಾರಿಗಳು ಹಾಜರಿದ್ದರು.






**ನೀರು ಮತ್ತು ನೈರ್ಮಲ್ಯಕ್ಕೆ ಸಂಬಂಧಪಟ್ಟ ಸಮಸ್ಯೆಗಳಿದ್ದಲ್ಲಿ ಕರೆ ಮಾಡಿ : 9480985555**